# ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಕುಮಟಾ

## ಸಿ.ಸಿ.ನಂ.191/2019

ಸಿ.ಡಬ್ಲ್ಯು 11

ಪಿ.ಡಬ್ಲ್ಯು 09

ಸಾಕ್ಷಿದಾರರ ಹೆಸರು - **ಬುದ್ದಾ ಶಿವು ಗೌಡಾ**

ತಂದೆಯ ಹೆಸರು - ಶಿವು ಗೌಡಾ

ವಯಸ್ಸು - 56 ವರ್ಷ

ಉದ್ಯೋಗ - ಕೂಲಿ ಕೆಲಸ

ವಾಸ್ತವ್ಯ - ದುಂಡಕುಳಿ, ಕುಮಟಾ

(ಇಂದು ದಿನಾಂಕಃ **18-03-2026** ರಂದು ಸತ್ಯಪ್ರತಿಜ್ಞೆಯ ಮೇರೆಗೆ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆ - ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನನಗೆ ಚಾಸಾ 1 ರವರ ಪರಿಚಯ ಇದೆ. ದುಂಡುಕುಳಿಯ, ಬೊಂಬೆ ಲಿಂಗೇಶ್ವರ ದೇವಸ್ಥಾನದಲ್ಲಿ ರಾತ್ರಿ ಕಳ್ಳರು ಬಂದು ಕಳ್ಳತನವನ್ನು ಮಾಡಿರುತ್ತಾರೆ. ದೇವಸ್ಥಾನದ ಶೇಟರನ್ನು ಮುರಿದು ಒಳಗಡೆ ಹೋಗಿ ದೇವರ ಕುತ್ತಿಗೆಯಲ್ಲಿ ಇದ್ದಂತಹ ಮೂರು ಬೆಳ್ಳಿಯ ಚೈನುಗಳನ್ನು ಕಳ್ಳತನ ಮಾಡಿರುತ್ತಾರೆ. ನಾನು ಬೆಳಿಗ್ಗೆ ಹೋಗಿ ನೋಡಿದಾಗ ಅಲ್ಲಿ ಎಲ್ಲಾ ಶೇಟರಗಳನ್ನು ಮುರಿದಿರುತ್ತಾರೆ. ಈ ಕುರಿತಾಗಿ ದೂರನ್ನು ನೀಡಿದ ನಂತರ ಪೊಲೀಸರು ಸ್ಥಳಕ್ಕೆ ಬಂದಿದ್ದು,

ಬರವಣಿಗೆ ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಸಾಕ್ಷಿಯು ನಿಪಿ 2 ರ ಮೇಲಿನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ2ಸಿ** ಎಂದು ಗುರುತಿಸಲಾಯಿತು.

ಪೊಲೀಸರು ಸುಮಾರು ದಿನಗಳ ನಂತರ ಕಳ್ಳರನ್ನು ಹಿಡಿದುಕೊಂಡು ಬಂದು ಘಟನಾ ಸ್ಥ,ಳಕ್ಕೆ ಬಂದಿರುತ್ತಾರೆ ಆಗ ನಾನು ಘಟನಾ ಸ್ಥಳದಲ್ಲಿ ನಾನು ಇರಲಿಲ್ಲ ಎಷ್ಟು ಜನ ಕಳ್ಳರು ಬಂದಿದ್ದರು ಎಂದು ನನಗೆ ಮಾಹಿತಿ ಇಲ್ಲ. ಆರೋಪಿಯನ್ನು ನೋಡಿದರೆ ಗುರುತಿಸಲು ಸರಾಧ್ಯವಿಲ್ಲ. 1ನೇ ಆರೋಪಿತನನ್ನು ನೋಡಿದರೆ ಗುರುತಿಸುತ್ತೇನೆ. 1ನೇ ಆರೋಪಿತರು ಗೈರು ಹಾಜರಿದ್ದು, ವಿನಾಯಿತಿ ಅರ್ಜಿ ಸಲ್ಲಿಸಲಾಗಿದ್ದು, ಸದರಿ ಆರೋಪಿತರ ಗುರುತಿಸುವಿಕೆಗೆ ಸಂಬಂಧಪಟ್ಟಂತೆ ತಕರಾರು ಇಲ್ಲವೆಂದು ಅವರ ಪರ ವಕೀಲರು ತಿಳಿಸಿರುತ್ತಾರೆ. ರಾಃ ಕುರಿತಾಗಿ ಯಾವುದೇ ಮರು ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸದ್ರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು –ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿನಾಂಕಃ 20/03/2017 ರಂದು ಪೋಲೀಸರು ಎರಡು ಜನ ಆರೋಪಿತರನ್ನು ಘಟನಾ ಸ್ಥಳಕ್ಕೆ ಕರೆದುಕೊಂಡು ಬಂದಿದ್ದರು ಎಂದರೆ ಸರಿಯಲ್ಲ. ಅವರ ಹೆಸರು ಮಹಮ್ಮದ ಲಿಯಾಖತ ಹಾಗೂ ಸಮೀರ ಖಾನ ಎಂದು ನನಗೆ ತಿಳಿಯಿತು ಎಂದರೆ ಸರಿಯಲ್ಲ. ಇವರೇ ದೇವಸ್ಥಾನದಲ್ಲಿ ಕಳ್ಳತನ ಮಾಡಿರುತ್ತಾರೆ ಎಂದು ನನಗೆ ತಿಳಿಯಿತು ಎಂದರೆ ಸರಿಯಲ್ಲ. ಈ ಕಏರಿತಾಗಿ ನಾನು ದಿನಾಂಕಃ 23/10/2017 ರಂದು ಮರು

ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಆರೋಪಿತರನ್ನು ಸ್ಥಳದಲ್ಲಿ ನೋಡಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು –ಆರೋಪಿ ಪರ ಶ್ರೀ. ಎನ್.ಎಮ್.ಎಚ್. ವಕೀಲರಿಂದ**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಸಹಿ ಇದೆ.

ಪ್ರಭಾರ ಪ್ರಧಾನ ಪ್ರ.ದ.ನ್ಯಾ.ದಂ. ಕುಮಟಾ